All India Radio: Bangalore
Regional Bulletin In Kannada
15.12.2024 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮಹದಾಯಿ ಯೋಜನೆಗೆ ಕೇಂದ್ರದಿಂದ ಸಚಿವ ಪ್ರಹ್ಲಾದ್ ಜೋಷಿ, ಅನುಮತಿ ಕೊಡಿಸಲಿ- ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್
- ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಭರದ ಸಿದ್ಧತೆ; ಪರಿಶೀಲನೆ ನಡೆಸಿದ ಸಚಿವ ಚಲುವರಾಯಸ್ವಾಮಿ
- ಬಿಜೆಪಿಯಲ್ಲಿ ಬಣ ರಾಜಕೀಯಕ್ಕೆ ಅವಕಾಶವಿಲ್ಲ; ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸ್ಪಷ್ಟನೆ
- ಅತುಲ್ ಸುಭಾಷ್ ಆತ್ಮಹತ್ಯೆ ಪ್ರಕರಣ - ಆರೋಪಿಗಳಿಗೆ ೧೪ ದಿನಗಳ ನ್ಯಾಯಾಂಗ ಬಂಧನ

***************

ಬಿಜೆಪಿ ನಾಯಕರಿಗೆ ಉತ್ತರ ಕರ್ನಾಟಕದ ಅಭಿವೃದ್ಧಿಯ ಬಗ್ಗೆ ಚರ್ಚೆ ಮಾಡುವ ಹಿತಾಸಕ್ತಿ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹದಾಯಿ ಯೋಜನೆ ಅನುಷ್ಠಾನಗೊಳಿಸಲು ಕೇಂದ್ರ ಅರಣ್ಯ ಸಚಿವರನ್ನು ಹಾಗೂ ಸಚಿವ ಪ್ರಹ್ಲಾದ ಜೋಶಿ ಅವರನ್ನು ಭೇಟಿ ಮಾಡಲಾಗಿದೆ. ಕೇಂದ್ರದ ಅನುಮತಿಗಾಗಿ ಕಾಯುತ್ತಿದ್ದು, ಅರಣ್ಯ ಇಲಾಖೆ ಅನುಮತಿ ಸಿಗುವ ಭರವಸೆ ಇದೆ. ಈ ವಿಷಯದ ಕುರಿತು ಸಚಿವ ಪ್ರಹ್ಲಾದ ಜೋಶಿ ಹಾಗೂ ಸಂಸದ ಜಗದೀಶ್ ಶೆಟ್ಟರ್ ಜವಾಬ್ದಾರಿ ತೆಗೆದುಕೊಳ್ಳಬೇಕಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ; ಡಿ.ಕೆ.ಶಿವಕುಮಾರ್

***************

ಮಂಡ್ಯದಲ್ಲಿ ಇದೇ ತಿಂಗಳ ೨೦ ರಿಂದ ೨೨ ರವರೆಗೆ ಮೂರು ದಿನಗಳ ಕಾಲ ನಡೆಯಲಿರುವ ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸಿದ್ಧತೆ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೂರು ದಿನಗಳ ಕಾಲ ನಡೆಯಲಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅಚ್ಚುಕಟ್ಟಾಗಿ ಆಯೋಜಿಸಲು ಎಲ್ಲ ಸಿದ್ಧತೆಗಳನ್ನು ಮಾಡಲಾಗಿದೆ. ಸಮ್ಮೇಳನದಲ್ಲಿ ಮೂರು ಲಕ್ಷಕ್ಕೂ ಅಧಿಕ ಮಂದಿ ಪಾಲ್ಗೊಳ್ಳುವ ನಿರೀಕ್ಷೆ ಇದ್ದು, ಯಾವುದೇ ರೀತಿಯಲ್ಲೂ ಕೊರತೆಯಾಗದಂತೆ ಎಲ್ಲ ವ್ಯವಸ್ಥೆಗಳನ್ನು ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಸಮ್ಮೇಳನದಲ್ಲಿ ನಾಡು, ನುಡಿಗೆ ಸಂಬಂಧಿಸಿದ ವಿವಿಧ ಗೋಷ್ಠಿಗಳು ನಡೆಯಲಿವೆ. ಸಾಹಿತ್ಯ ಸಮ್ಮೇಳನ ಯಶಸ್ವಿಗೊಳಿಸಲು ಎಲ್ಲರ ಸಹಕಾರ ಅತ್ಯಗತ್ಯ ಎಂದು ಅವರು ಮನವಿ ಮಾಡಿದ್ದಾರೆ.

***************

ದಾವಣಗೆರೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪರ ಬಣದ ಸಭೆ ನಡೆಯುತ್ತಿದೆ. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಬಿಜೆಪಿಯಲ್ಲಿ ಬಣ ರಾಜಕೀಯಕ್ಕೆ ಅವಕಾಶ ಇಲ್ಲವೇ ಇಲ್ಲ ಎಂದು ಸಷ್ಟಪಡಿಸಿದ್ದಾರೆ.

ಬಣದ ಹೆಸರಿನಲ್ಲಿ ಸಭೆಗಳನ್ನು ಆಯೋಜಿಸುವುದನ್ನು ಒಪ್ಪಲಾಗದು. ಈ ನಿಟ್ಟಿನಲ್ಲಿ ಸಭೆ, ಸಮಾವೇಶಗಳನ್ನು ಮಾಡಲು ಯಾರೇ ಹೊರಟಿದ್ದರೂ ಕೂಡಲೇ ತಮ್ಮ ಚಟುವಟಿಕೆಗಳನ್ನು ಸ್ಥಗಿತಗೊಳಿಸಬೇಕೆಂದು ತಿಳಿಸಿದ್ದಾರೆ.

ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷ ಸಂಘಟನೆಗೆ ಇನ್ನಷ್ಟು ಬಲ ತುಂಬುವ ಕಾರ್ಯಕ್ರಮದಡಿಯಲ್ಲಿ ಪಕ್ಷದ ಹಿರಿಯರು, ಶಾಸಕರು, ಮಾಜಿ ಶಾಸಕರು ಹಾಗೂ ಪಕ್ಷದ ಎಲ್ಲ

ಹಿರಿಯರ ಸಭೆ ಕರೆಯಲಾಗುವುದು. ಭಾರತೀಯ ಜನತಾ ಪಾರ್ಟಿ ಕೂಡು ಕುಟುಂಬವಿದ್ದಂತೆ ಎಂದು ಹೇಳಿದ್ದಾರೆ.

***************

ವಕ್ಫ್ ಅತಿಕ್ರಮದ ಬಗ್ಗೆ ಮೌನವಾಗಿರಲು ಬಿ.ವೈ.ವಿಜಯೇಂದ್ರ ತಮಗೆ ತಮಗೆ ೧೫೦ ಕೋಟಿ ರೂಪಾಯಿ ಆಮಿಷವೊಡ್ಡಿದ್ದರು ಎಂಬ ಆರೋಪವನ್ನು ಅಲ್ಪಸಂಖ್ಯಾತ ಆಯೋಗದ ಮಾಜಿ ಅಧ್ಯಕ್ಷ ಅನ್ವರ್ ಮಾಣಿಪ್ಪಾಡಿ ತಳ್ಳಿ ಹಾಕಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅಲ್ಪಸಂಖ್ಯಾತರ ಬಗ್ಗೆ ಕಾಳಜಿ ಇದ್ದರೆ, ವಕ್ಫ್ ಅತಿಕ್ರಮಣದ ಕುರಿತು ತಮ್ಮ ವರದಿಯನ್ನು ಸಿಬಿಐಗೆ ನೀಡಲಿ ಎಂದು ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನಿನ್ನೆ ಈ ಕುರಿತಂತೆ ಪತ್ರಿಕಾ ಹೇಳಿಕೆ ನೀಡಿದ್ದರು.

***************

೧೨ ಮಂದಿ ಸಾಧಕರಿಗೆ ಈ ಬಾರಿಯ ಅವ್ವ ಪ್ರಶಸ್ತಿ ಪ್ರಧಾನ ಮಾಡಲಾಗಿದೆ. ಸಾಹಿತಿ ಸಂಗಮನಾಥ ಲೋಕಾಪುರ, ಗಾಯಕಿ ರೇಖಾ ಹೆಗಡೆ, ಉದ್ಯಮಿ ಮಹೇಂದ್ರ ಸಿಂಘಿ, ಬಸವ ತತ್ವ ಪ್ರಚಾರಕ ಎಸ್. ಮಹದೇವಯ್ಯ ಸೇರಿ ೧೨ ಮಂದಿಗೆ ಅವ್ವ ಸೇವಾ ಟ್ರಸ್ಟ್ ವತಿಯಿಂದ ಅವ್ವ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಹುಬ್ಬಳ್ಳಿಯಲ್ಲಿ ನಡೆದ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಅವರ ಪುಣ್ಯಸ್ಮರಣೆ ಕಾರ್ಯಕ್ರಮದಡಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಿಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಪ್ರಶಸ್ತಿ ಪ್ರದಾನ ಮಾಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಅವ್ವನ ಹೆಸರಿನಲ್ಲಿ ವಿಧಾನಪರಿಷತ್ ಸಭಾಪತಿ  ಬಸವರಾಜ ಹೊರಟ್ಟಿ ಅವರು ಪ್ರಶಸ್ತಿ ನೀಡುತ್ತಿರುವುದು ರಾಜ್ಯಕ್ಕೆ ಮಾದರಿ ಎಂದು ತಿಳಿಸಿದರು.

***************

ದೇಶಾದ್ಯಂತ ಸದ್ದು ಮಾಡಿದ್ದ ಬೆಂಗಳೂರಿನ ಐಟಿ ಉದ್ಯೋಗಿ ಅತುಲ್ ಸುಭಾಷ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರ ಪತ್ನಿ, ಆಕೆಯ ತಾಯಿ ಹಾಗೂ ಸಹೋದರನನ್ನು ಬೆಂಗಳೂರು ಪೊಲೀಸರು ಬಂಧಿಸಿದ್ದಾರೆ.

ಅತುಲ್ ಸುಭಾಷ್ ಪತ್ನಿ ನಿಖಿತಾ ಸಿಂಘಾನಿಯಾ ಅವರನ್ನು ಹರಿಯಾಣದ ಗುರುಗ್ರಾಮದಲ್ಲಿ ಹಾಗೂ ಅವರ ತಾಯಿ ನಿಶಾ ಸಿಂಘಾನಿಯಾ ಮತ್ತು ತಮ್ಮ ಅನುರಾಗ್ ಸಿಂಘಾನಿಯಾ ಅವರನ್ನು ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಬಂಧಿಸಲಾಗಿದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ತಿಳಿಸಿದೆ.

ಬೆಂಗಳೂರಿನ ಆಟೋಮೊಬೈಲ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ೩೪ ವರ್ಷದ ಅತುಲ್ ಸುಭಾಷ್, ವಿಚ್ಛೇದನಕ್ಕಾಗಿ ಪತ್ನಿ, ೩ ಕೋಟಿ ರೂಪಾಯಿ ಜೀವನಾಂಶಕ್ಕೆ ಬೇಡಿಕೆ ಇಟ್ಟಿದ್ದರಿಂದ ಅವರು ಡಿಸೆಂಬರ್ ೯ ರ ಮುಂಜಾನೆ ತಮ್ಮ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದರು

ಈಗ ಆರೋಪಿಗಳನ್ನು ಬಂಧಿಸುವಲ್ಲಿ ಪೊಲೀಸರು ಸಫಲರಾಗಿದ್ದು, ಅವರನ್ನು ಬೆಂಗಳೂರಿಗೆ ಕರೆತಂದು ನ್ಯಾಯಾಲಯಕ್ಕೆ ಹಾಜರುಪಡಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಪ್ರಕರಣದ ನಾಲ್ಕನೇ ಆರೋಪಿಯನ್ನು ಬಂಧಿಸುವ ಪ್ರಯತ್ನಗಳು ಮುಂದುವರಿದಿದ್ದು, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇನ್ನು ಹೆಚ್ಚಿನ ಮಾಹಿತಿ ಲಭ್ಯವಾಗಬೇಕಿದೆ.

***************

ರಾಜ್ಯಾದ್ಯಂತ ನಿನ್ನೆ ನಡೆದ ಬೃಹತ್ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಸಾವಿರಾರು ಪ್ರಕರಣಗಳು ರಾಜಿ-ಸಧಾನದ ಮೂಲಕ ಇತ್ಯರ್ಥವಾಗಿವೆ.

ಕೊಪ್ಪಳ ಜಿಲ್ಲೆಯ ನಾಲ್ಕು ನ್ಯಾಯಾಲಯಗಳಲ್ಲಿನ ಲೋಕ ಆದಾಲತ್ ಕಾರ್ಯಕ್ರಮದಲ್ಲಿ ೧ ಸಾವಿರದ ೯೪೯ ಪ್ರಕರಣಗಳು ರಾಜಿ ಸಂಧಾನದ ಮೂಲಕ ಇತ್ಯರ್ಥವಾಗಿವೆ. ೫ ಕೋಟಿ ೫೮ ಲಕ್ಷ ಹಣವನ್ನು ಲೋಕ ಆದಾಲತ್ ನಿಂದ ಸರ್ಕಾರಕ್ಕೆ ಜಮಾ ಮಾಡಲಾಗಿದ್ದು ವಿವಾಹ ವಿಚ್ಚೇನದ ಕೋರಿದ್ದ ಎರಡು ಜೋಡಿಗಳು ಪರಸ್ಪರ ರಾಜಿಯಾಗುವ ಮೂಲಕ ಒಂದಾಗಿದ್ದಾರೆ.

ದಾವಣಗೆರೆ ಜಿಲ್ಲೆಯ ೨೪ ನ್ಯಾಯಾಲಯಗಳಲ್ಲಿ ನಡೆದ ಲೋಕ ಅದಾಲತ್‌ನಲ್ಲಿ ವಿಚಾರಣೆಗೆ ಬಾಕಿ ಇದ್ದ ೬ ಸಾವಿರದ ೪೯೨ ಪ್ರಕರಣಗಳನ್ನು ರಾಜಿ ಮತ್ತು ೨ ಲಕ್ಷದ ೪೬ ಲಕ್ಷ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಸಂಧಾನದ ಮೂಲಕ ಬಗೆಹರಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಕರಣ್ಣವರ ತಿಳಿಸಿದ್ದಾರೆ.

ಇದೇ ವೇಳೆ ವಿವಾಹ ವಿಚ್ಛೇದನ ಮತ್ತು ಜೀವನಾಂಶ ಕೋರಿ ಕೌಟುಂಬಿಕ ನ್ಯಾಯಾಲಯದ ಮೆಟ್ಟಿಲೇರಿದ್ದ ವ್ಯಾಜ್ಯಗಳಲ್ಲಿ ೩೧ ಪ್ರಕರಣಗಳನ್ನು ರಾಜಿ ಮೂಲಕ ಬಗೆಹರಿಸಲಾಗಿದೆ. ಮರಳಿ ಒಂದಾದ ದಂಪತಿಗಳು ಹೂವಿನ ಹಾರವನ್ನು ಬದಲಿಸಿಕೊಂಡರು. ಸಿಹಿ ವಿತರಿಸಿ ಸಂಭ್ರಮದಿಂದ ಮನೆಗೆ ಮರಳಿದರು ಎಂದು ಮಹಾವೀರ ಕರಣ್ಣವರ ಹೇಳಿದ್ದಾರೆ.

ಯಾದಗಿರಿ ಜಿಲ್ಲೆಯಾದ್ಯಂತ ನಡೆದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ೧೦ ಪೀಠಗಳಲ್ಲಿ ೧೫ ಸಾವಿರದ ೫೩೨ ಪ್ರಕರಣಗಳು ಇತ್ಯರ್ಥವಾಗಿವೆ ಎಂದು ಯಾದಗಿರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶೆ ಬಿ.ಎಸ್.ರೇಖಾ ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ೪ ಸಾವಿರದ ೬೨೬ ಪ್ರಕರಣ ಹಾಗೂ ವ್ಯಾಜ್ಯಪೂರ್ವ ೧೦ ಸಾವಿರದ ೯೦೬ ಕಂದಾಯ, ಮೋಟರ್ ವಾಹನ ಕಾಯ್ದೆ ಉಲ್ಲಂಘನೆ ಪ್ರಕರಣಗಳನ್ನು ಸೇರಿ ಒಟ್ಟು ೧೫ ಸಾವಿರದ ೫೩೨ ಪ್ರಕರಣಗಳು ರಾಜಿ ಸಂಧಾನದ ಮೂಲಕ ಇತ್ಯರ್ಥಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

ಕೋಲಾರ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಒಟ್ಟು ೪೯ ಸಾವಿರದ ೭೯ ವ್ಯಾಜ್ಯ ಪೂರ್ವ ಪ್ರಕರಣಗಳು ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಇರುವ ೧೦ ಸಾವಿರದ ೧೧೩ ಪ್ರಕರಣಗಳನ್ನು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥ ಮಾಡಲಾಯಿತು ಎಂದು ಜಿಲ್ಲಾ ಮತ್ತು ಸೆಷನ್ಸ್ ಪ್ರಧಾನ ನ್ಯಾಯಾಧೀಶ ಜಿ.ಎ.ಮಂಜುನಾಥ ತಿಳಿಸಿದ್ದಾರೆ.

ಧ್ವನಿ: ಜಿ.ಎ.ಮಂಜುನಾಥ್

***************

ಕೇಂದ್ರ ಸರ್ಕಾರದ ಮಹತ್ವಕಾಂಕ್ಷೆಯ ಪ್ರಧಾನಮಂತ್ರಿ ಜನ್ ಆರೋಗ್ಯ ಯೋಜನೆ ಆರ್ಥಿಕ ಸಮಸ್ಯೆಯಿಂದ ಬಳಲುತ್ತಿರುವವರಿಗೆ ವರದಾನವಾಗಿದೆ ಎಂದು ದಾವಣಗೆರೆ ಜಿಲ್ಲಾ ಆಯುಷ್ ಅಧಿಕಾರಿ ಡಾ.ಯೋಗೇಂದ್ರ ಕುಮಾರ್ ತಿಳಿಸಿದ್ದಾರೆ.

ಹರಿಹರ ತಾಲ್ಲೂಕಿನ ನಂದಿಗುಡಿ ಮೊರಾರ್ಜಿ ವಸತಿ ಶಾಲೆಯಲ್ಲಿ ವಿದ್ಯಾರ್ಥಿ ಚೇತನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಹಲವು ಆರೋಗ್ಯ ಯೋಜನೆಗಳ ಕುರಿತು ವಿದ್ಯಾರ್ಥಿಗಳು ಪೋಷಕರಿಗೆ ಮಾಹಿತಿ ನೀಡುವ ಮೂಲಕ ಆರೋಗ್ಯವಂತ ಕುಟುಂಬ ನಿರ್ಮಾಣಕ್ಕೆ ಕೊಡುಗೆ ನೀಡಬೇಕೆಂದು ಕರೆ ನೀಡಿದರು.

***************

ಶರಣರು ಸಮ-ಸಮಾಜದ ನಿರ್ಮಾಣಕ್ಕೆ ಜನರಲ್ಲಿ ಜಾಗೃತಿ ಮೂಡಿಸಿದವರು ಎಂದು ಜಗದ್ಗುರು ತೋಂಟದಾರ್ಯ ಸಂಸ್ಥಾನ ಮಠದ ತೋಂಟದ ಸಿದ್ಧರಾಮ ಸ್ವಾಮೀಜಿ ತಿಳಿಸಿದ್ದಾರೆ.

ಯಾದಗಿರಿಯಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನಿಂದ ಪ್ರಕಟಿತ ಕೃತಿಗಳ ಬಿಡುಗಡೆ ಮಾಡಿ ಮಾತನಾಡಿದ ಅವರು, ಶರಣರ ಕಾರ್ಯ ಮಾನವೀಯತೆ ಹುಟ್ಟುಹಾಕಿದೆ. ನಾವೆಲ್ಲರೂ ಇದನ್ನು ಪಾಲಿಸುವ ಮೂಲಕ ಶರಣರ ಕಾಯಕ ಮತ್ತು ತತ್ವಗಳನ್ನು ಜೀವಂತವಾಗಿಡಬೇಕು ಎಂದು ತಿಳಿಸಿದ್ದಾರೆ.

***************

ಬ್ರಿಸ್ಬೇನ್‌ನ ಗಾಬಾ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಬಾರ್ಡರ್ ಗವಾಸ್ಕರ್ ಟ್ರೋಫಿಯ ಮೂರನೇ ಟೆಸ್ಟ್ ಪಂದ್ಯದ ೨ನೇ ದಿನವಾದ ಇಂದು ಆಸ್ಟ್ರೇಲಿಯಾ ಮೈಲುಗೈ ಸಾಧಿಸಿದೆ.

ಮೊದಲ ದಿನದಾಟ ಮಳೆಯಿಂದಾಗಿ ಸ್ಥಗಿತಗೊಂಡಿತ್ತು. ಎರಡನೇ ದಿನದಾಟದಲ್ಲಿ ಆಸ್ಟ್ರೇಲಿಯಾ ಬ್ಯಾಟರ್‌ಗಳು ೧೦೧ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೪೦೫ ರನ್ ಗಳಿಸಿದ್ದಾರೆ.

********ಮುಕ್ತಾಯ*******